(ಸದನವು ಸಂಜೆ 6 ಗಂಟೆ 34 ನಿಮಿಷಕ್ಕೆ ಮುಂದುಡಲ್ಪಟ್ಟು ಮುಕ್ತಾಯಗೊಂಡು ಪುನಃ ದಿನಾಂಕ:13-03-2003ನೇ ಗುರುವಾರದಂದು ಬೆಳಿಗ್ಗೆ 11-00 ಗಂಟೆಗೆ ಸೇರಲು ನಿಶ್ಚಯಿಸಿತು).

7. ಅನುಬಂಧ I

ಗ್ರಾಮ ಪಂಚಾಯತಿ ಮಟ್ಟದಲ್ಲಿ ಗ್ರಂಥಾಲಯಗಳ ಸ್ಥಾಪನೆ

909 (1169) ಶ್ರೀ ಅಪ್ಪಚ್ಚು ರಂಜನ್ ಎಂಪಿ (ಸೋಮವಾರ ಪೇಟೆ): ಮಾನ್ಯ ವಯಸ್ಕರ ಶಿಕ್ಷಣ ಗ್ರಂಥಾಲಯಗಳು, ಮುದ್ರಣ ಮತ್ತು ಲೇಖನ ಸಾಮಗ್ರಿಗಳ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಈ ಹಿಂದೆ ಸರ್ಕಾರ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಎಷ್ಟು ಗ್ರಂಥಾಲಯಗಳನ್ನು ತೆರೆಯುವುದಾಗಿ ಘೋಷಣೆ ಮಾಡಲಾಗಿತ್ತು?

ಆ) ಎಷ್ಟು ಗ್ರಂಥಾಲಯಗಳನ್ನು ತೆರೆಯಲಾಗಿದೆ: ತೆರೆಯಲು ಎಷ್ಟು ಬಾಕಿ ಇದೆ?

ಇ) ಉಳಿದ, ಗ್ರಂಥಾಲಯಗಳನ್ನು ತೆರೆಯಲು ಯಾವ ಕ್ರಮ ಕೈಗೊಳ್ಳಲಾಗಿದೆ.

ಈ) ಗ್ರಂಥಾಲಯ ಮೇಲ್ವಿಚಾರಕರ ಸೇವೆಯನ್ನು ಖಾಯಂಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ?

ಶ್ರೀ ಬಾಬುರಾವ್ ಚವ್ಹಾಣ್ (ವಯಸ್ಕರ ಶಿಕ್ಷಣ, ಗ್ರಂಥಾಲಯಗಳು, ಮುದ್ರಣ ಮತ್ತು ಲೇಖನ ಸಾಮಗ್ರಿಗಳ ರಾಜ್ಯ ಸಚಿವರು) :

ಅ) ಹಣಕಾಸಿನ ಲಭ್ಯತೆ ಮೇರೆಗೆ ಹಂತ ಹಂತವಾಗಿ ರಾಜ್ಯದಲ್ಲಿನ ಎಲ್ಲಾ ಗ್ರಾಮ ಪಂಚಾಯ್ತಿಗಳಲ್ಲಿ ಗ್ರಂಥಾಲಯಗಳನ್ನು ತೆರೆಯುವುದಾಗಿ ತಿಳಿಸಿದೆ.

ಆ) 3251 ಗ್ರಾಮ ಪಂಚಾಯಿತಿ ಗ್ರಂಥಾಲಯಗಳು ಮಂಜೂರಾಗಿವೆ. ಇನ್ನು 2404 ತೆರೆಯಲು ಬಾಕಿ ಇದೆ.

ಇ) ಹಣಕಾಸಿನ ಲಭ್ಯತೆ ಮೇರೆಗೆ ಹಂತ ಹಂತವಾಗಿ ಗ್ರಂಥಾಲಯಗಳನ್ನು ತೆರೆಯಲು ಕ್ರಮ ಕೈಗೊಳ್ಳಲಾಗುವುದು.

ಈ) ಇಲ್ಲ

ಸೋಮವಾರ ಪೇಟೆ ತಾಲ್ಲೂಕಿನಲ್ಲಿ ಶಿಕ್ಷಣ ಸಂಯೋಜಕರಾಗಿ ನಿಯೋಜನೆಗೊಂಡಿರುವ ಅಧಿಕಾರಿ ಕರ್ತವ್ಯಕ್ಕೆ ಹಾಜರಾಗದಿರುವುದು

910 (1258) ಶ್ರೀ ಅಪ್ಪಚ್ಚು ರಂಜನ್ (ಸೋಮವಾರ ಪೇಟೆ): ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸೋಮವಾರಪೇಟೆ ತಾಲ್ಲೂಕಿನ ಶಿಕ್ಷಣ ಸಂಯೋಜಕರಾಗಿ ಕಾರ್ಯ ನಿರ್ವಹಿಸುತ್ತಿದ್ದ ಕೆ.ಕೆ. ಮಂಜುನಾಥರವರನ್ನು ಕಿರಂಗಂದೂರು ಪ್ರೌಢ ಶಾಲೆಗೆ ನಿಯೋಜಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ನಿಯೋಜಿತ ಸ್ಥಳಕ್ಕೆ ಇನ್ನು ಕರ್ತವ್ಯದ ಮೇಲೆ ಹಾಜರಾಗದಿಲ್ಲದಿರುವುದು ನಿಜವೇ? - ಹಾಜರಾಗಿಲ್ಲದಿರುವುದಕ್ಕೆ ಯಾವ ಕ್ರಮ ಕೈಗೊಂಡಿದ್ದೀರಿ.

ಪೊ. ಬಿ. ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು) :

ಅ) ಹೌದು ಬಂದಿದೆ

ಆ) ಹೌದು. ಸದರಿಯವರನ್ನು ದಿನಾಂಕ:22/10/2002 ರಂದು ಸೇವೆಯಿಂದ ಅಮಾನತ್ತಿನಲ್ಲಿಡ ಲಾರಿತು ತದನಂತರ ಇವರ ಅಮಾನತ್ತನ್ನು ತೆರೆವುಗೊಳಿಸಿ ಸರ್ಕಾರಿ ಪ್ರೌಢ ಶಾಲೆ ಬಸವನಹಳ್ಳಿ. ಸೋಮವಾರ ಪೇಟೆ ಇಲ್ಲಿಗೆ ವರ್ಗಾಯಿಸಿದ ಪ್ರಕಾರ ದಿ:20/02/2003 ರಂದು ಸದರಿಯವರು ವರ್ಗಾಯಿಸಿದ ಸ್ಥಳದಲ್ಲಿ ಕರ್ತವ್ಯದ ಮೇಲೆ ಹಾಜರಾಗಿರುತ್ತಾರೆ.

ವಿದ್ಯಾರ್ಥಿ ವೇತನ ಪಡೆಯಲು ಆದಾಯ ದೃಢೀಕರಣ ಪತ್ರ

911 (1259) ಶ್ರೀ ಅಪ್ಪಚ್ಚು ರಂಜನ್ (ಸೋಮವಾರ ಪೇಟೆ): ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವಿದ್ಯಾರ್ಥಿ ವೇತನ ಪಡೆಯಲು ಶಾಲಾ ಮಕ್ಕಳಿಗೆ ಯಾವ ಮಾನದಂಡದ ಆಧಾರದ ಮೇಲೆ ಆದಾಯ ದೃಢೀಕರಣ ಪತ್ರ ವಿತರಿಸುತ್ತೀರಿ? ವಾರ್ಷಿಕ ವರಮಾನದ ಮಿತಿಯನ್ನು ಎಷ್ಟಕ್ಕೆ ನಿಗಧಿಗೊಳಿಸಲಾಗಿದೆ? (ವಿವರ ನೀಡುವುದು)

ಆ) ರಾಜ್ಯದ ಎಲ್ಲಾ ಭಾಗಗಳಲ್ಲೂ ಒಂದೇ ಮಾನದಂಡವನ್ನು ಅನುಸರಿಸಲಾಗುತ್ತಿದೆಯೇ? ಇಲ್ಲದಿದ್ದಲ್ಲಿ ಕಾರಣಗಳೇನು?

ಪ್ರೊ. ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು):

ಅ) ಘೋಷಕರ ಆದಾಯವನ್ನು ಆಧರಿಸಿ ದೃಢೀಕರಣ ಪತ್ರವನ್ನು ತಾಲ್ಲೂಕು ತಹಸಿಲ್ದಾರರು ನೀಡುತ್ತಾರೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಡಗದ ವಿದ್ಯಾರ್ಥಿಗಳಿಗೆ 1 ರಿಂದ 10ನೇ ತರಗತಿವರೆಗೆ, ಆದಾಯ ಮಿತಿ ಇರುವುದಿಲ್ಲ. ಹಿಂದುಳಿದ ವರ್ಗದ ವಿದ್ಯಾರ್ಥಿಗಳ ಘೋಷಕರಿಗೆ ರೂ.15,000-00ಗಳ ವಾರ್ಷಿಕ ವರಮಾನದ ಮಿತಿಯನ್ನು ನಿಗಧಿಪಡಿಸಲಾಗಿದೆ.

ಆ) ರಾಜ್ಯದ ಎಲ್ಲಾ ಭಾಗಗಳಲ್ಲೂ ಒಂದೇ ಮಾನದಂಡ ಅನುಸರಿಸಲಾಗುತ್ತಿದೆ.

ಪುಸ್ತಕ ಪ್ರಾಧಿಕಾರದ ಭಾಷಾಂತರ ಯೋಜನೆ

913 (1176) ಶ್ರೀ ಅರಗ ಜ್ಞಾನೇಂದ್ರ (ತೀರ್ಥಹಳ್ಳಿ): ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ರಾಜ್ಯ ಸಚಿವೆಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಪುಸ್ತಕ ಪ್ರಾಧಿಕಾರದ ಕಾರ್ಯ ವ್ಯಾಪ್ತಿಗಳೇನು? ಈ ಮೂಲಕ ಜಾರಿಗೆ ತರಲು ಉದ್ದೇಶಿಸಿರುವ ಯೋಜನೆಗಳಾವುವು?

2) ಈ ಪ್ರಾಧಿಕಾರದ ವತಿಯಿಂದ ಭಾಷಾಂತರ ಯೋಜನೆ ರೂಪಿಸಲಾಗಿದೆಯೇ?

3) ಯಾವ ಯಾವ ಭಾಷೆಯ ಒಷ್ಟು ಪುಸ್ತಕಗಳನ್ನು ತರ್ಜುಮೆ ಮಾಡಿ ಪ್ರಕಟಿಸಲಾಗುವುದು?

4) ಇದಕ್ಕೆ ತಗಲುವ ವೆಚ್ಚವೆಷ್ಟು? ಈ ಕಾರ್ಯಕ್ಕೆ ಸರ್ಕಾರ ನಿಗದಿಪಡಿಸಿರುವ ಹಣ ಎಷ್ಟು?

5) ಕನ್ನಡ ಅನುವಾದ ಮಾಲೆ, ಜಾಗತಿಕ ಚಿಂತಕರು ಮಾಲೆ, ದಲಿತ ಸಾಹಿತ್ಯ ಮಾಲೆ-ಇವುಗಳ ಅನುಷ್ಠಾನ ಯಾವ ಹಂತದಲ್ಲಿದೆ?

6) ಅಧಿಕಾರಿಗಳ ನಿರ್ಲಕ್ಷ್ಯದಿಂದಾಗಿ ನೆನಗುದಿಗೆ ಬಿದ್ದ ವಿಚಾರದ ಬಗ್ಗೆ ಸರ್ಕಾರದ ನಿಲುವೇನು?

ಶ್ರೀಮತಿ ರಾಣಿ ಸತೀಶ್ (ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ರಾಜ್ಯ ಸಚಿವೆಯವರು):